# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 65 | Pages. 2 | Date: 07-02-2026, SATURDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 65 - ಪುಟಗಳು : 2 | 07-02-2026 | ಶನಿವಾರ | Ph: 8762954248 | ದರ : ₹1


# ದೇಶಿ ಜಾನುವಾರು ಸಂರಕ್ಷಣೆಗೆ ಮನವಿ

## 87ನೇ ಚಂದ್ರಮೌಳೇಶ್ವರ ದನಗಳ ಜಾತ್ರೆಗೆ ಚಾಲನೆ | ವಿವಿಧ ಭಾಗದ ರಾಸುಗಳು ಭಾಗಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ದೇಶಿ ತಳಿಯ ಜಾನುವಾರಗಳ ರಕ್ಷಣೆಗೆ ಸರ್ಕಾರ ಆದ್ಯತೆ ನೀಡಬೇಕು. ವ್ಯವಸಾಯ ಕ್ಷೇತ್ರ ಉತ್ತೇಜನಕ್ಕೆ ಪ್ರೋತ್ಸಾಹ ನೀಡಬೇಕು ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಹೇಳಿದರು.

ಪಟ್ಟಣದ ಪುರಸಭೆ ಮುಂಭಾಗ ಶುಕ್ರವಾರ ಇತಿಹಾಸ ಪ್ರಸಿದ್ಧ ಚಂದ್ರಮೌಳೇಶ್ವರ ರಥೋತ್ಸವ ಅಂಗವಾಗಿ 87ನೇ ದನಗಳ ಜಾತ್ರೆಗೆ ಚಾಲನೆ ನೀಡಿ ಅವರು ಮಾತನಾಡಿ, ಆಧುನಿಕ ಕೃಷಿ ಪದ್ಧತಿಯಿಂದ ಹಳ್ಳಿಗಳಲ್ಲಿ ದನಗಳನ್ನು ಸಾಕುವವರ ಸಂಖ್ಯೆ ಕ್ಷೀಣಿಸುತ್ತಿದೆ ಎಂದರು.

ಹಿಂದಿನ ಕಾಲದಲ್ಲಿ ಉಳುಮೆ ಮಾಡಲು ಪ್ರತಿ ಮನೆಯಲ್ಲೂ ಒಂದು ಅಥವಾ ಎರಡು ಜೋಡಿ ಎತ್ತುಗಳು ಇರುತ್ತಿದ್ದವು. ಆದರೆ ಇಂದು ಉಳುಮೆ ಮಾಡುವ ರೈತರೇ ಇಲ್ಲವಾಗಿದ್ದಾರೆ. ನೇಗಿಲ ಯೋಗಿಗಳ ಅಭಾವದಿಂದ ರೈತರು ಟ್ರ್ಯಾಕ್ಟರ್ ಮೂಲಕ ಉಳುಮೆ ಮಾಡುವಂತಾಗಿದೆ. ಹೈನುಗಾರಿಕೆ ಮಾಡುವ ಉದ್ದೇಶದಿಂದ ಸಾಕಿರುವ ಹಸುಗಳನ್ನು ಬಿಟ್ಟರೆ ಹಳ್ಳಿಗಳಲ್ಲಿ ನಾಟಿ ರಾಸುಗಳೇ ಇಲ್ಲವಾಗಿವೆ ಎಂದು ತಿಳಿಸಿದರು.

ಹಸುಗಳು ಆರ್ಥಿಕತೆಯ ಬೆನ್ನೆಲುಬು, ದೇಸಿ ತಳಿ ರಾಸುಗಳ ರಕ್ಷಣೆ ಕೇವಲ ಉಳುಮೆ ಮಾಡಲು ಅಲ್ಲ ಅದೊಂದು ಸೇವೆ ಹಾಗೂ ಇದನ್ನು ಸಂರಕ್ಷಿಸುವ ಹೊಣೆ ನಮ್ಮ ಮೇಲಿದೆ. ನಮ್ಮ ಕಾಲಕ್ಕೆ ದೇಸಿ ರಾಸುಗಳ ಹಲವು ತಳಿಗಳು ನಶಿಸುವ ಹಂತ ತಲುಪಿವೆ. ಈಗಲಾದರೂ ಎಚ್ಚೆತ್ತು ದೇಸಿತಳಿ ರಾಸುಗಳ ಅಭಿವೃದ್ಧಿಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸಲಹೆ ನೀಡಿದರು.

ಕರೋನಾ, ಗಂಟುರೋಗ ಮತ್ತು ಕಾಲುಬಾಯಿ ರೋಗದ ಹಿನ್ನೆಲೆಯಲ್ಲಿ ಏಳು ವರ್ಷಗಳಿಂದ ಸ್ಥಗಿತಗೊಳಿಸಿದ ದನಗಳ ಜಾತ್ರೆಯನ್ನು ರೈತ ಮುಖಂಡರ ಮನವಿಯಂತೆ ಪುರಸಭೆ ವತಿಯಿಂದ ಜಾತ್ರೆಗೆ ಕಳೆದ ವರ್ಷದಿಂದ ಚಾಲನೆ ನೀಡಲಾಗಿದೆ. ದನಗಳ ಜಾತ್ರೆ ಈ ಬಾರಿ ಸಣ್ಣ ಪ್ರಮಾಣದಲ್ಲಾದರೂ ಮುಂದಿನ ಬಾರಿ ಎಲ್ಲಾ ರೈತರ ಸಹಕಾರದೊಂದಿಗೆ ದೊಡ್ಡ ಪ್ರಮಾಣದಲ್ಲಿ ನಡೆಸಲಾಗುವುದು ಎಂದರು.



ಎಪಿಎಂಸಿ ಆವರಣದಲ್ಲಿ ದನಗಳ ಜಾತ್ರೆಗೆ ಸಕಲ ಸಿದ್ಧತೆ ಮಾಡಿಕೊಂಡಿದ್ದು ವಿದ್ಯುತ್ ದೀಪ ರಾಸುಗಳಿಗೆ ಕುಡಿಯುವ ನೀರು, ಮೇವು, ಶುಚಿತ್ವ ಸೇರಿದಂತೆ ಶಾಂತಿ ಸುವ್ಯವಸ್ಥೆ ಕಾಪಾಡಲು ಪೊಲೀಸ್ ಭದ್ರತೆ ಸೇರಿದಂತೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದರು.

ಫೆ.13ರ ವರೆಗೆ ದನಗಳ ಜಾತ್ರೆ ನಡೆಯಲಿದ್ದು, ಬೇರೆ ಜಿಲ್ಲೆಗಳಿಂದಲೂ ದನಗಳ ಆಗಮನವಾಗಿದ್ದು, ಉತ್ತಮವಾದ ರಾಸುಗಳಿಗೆ ಎಪಿಎಂಸಿ ಮತ್ತು ಪುರಸಭೆ ವತಿಯಿಂದ ಆಯ್ಕೆ ತಂಡ ಸೂಚಿಸಿದ 18 ಜೋಡಿಗಳಿಗೆ ಬಹುಮಾನಗಳನ್ನು ನೀಡಲಾಗುವುದು. ಫೆ.13ರಂದು ಎಪಿಎಂಸಿ ಆವರಣದ ನಡೆಯುವ ಸಮಾರೋಪ ಸಮಾರಂಭದಲ್ಲಿ ರಾಸುಗಳಿಗೆ ಬಹುಮಾನ ವಿತರಣೆ ಮಾಡಲಾಗುವುದೆಂದು ತಿಳಿಸಿದರು.

ಪುರಸಭಾ ಮಾಜಿ ಅಧ್ಯಕ್ಷ ಸಿ.ಎನ್. ಮೋಹನ್, ಮುಖ್ಯಾಧಿಕಾರಿ ಆರ್. ಯತೀಶ್ ಕುಮಾರ್, ಎಪಿಎಂಸಿ ಕಾರ್ಯದರ್ಶಿ ಸೋಮಶೇಖರ್, ಟಿಎಪಿಸಿಎಂಎಸ್ ಅಧ್ಯಕ್ಷ ವೆಂಕಟೇಶಮೂರ್ತಿ, ನಿರ್ದೇಶಕ ಎಂ.ಆರ್.ಅನಿಲ್, ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ಡಾ.ಬಿ.ಆರ್ .ಯುವರಾಜ್, ರೈತ ಸಂಘದ ಅಧ್ಯಕ್ಷ ರವಿಗೌಡಯ್ಯ, ಮುಖಂಡರಾದ ರವಿ, ಕೃಷ್ಣ, ಎಪಿಎಂಸಿ ಹಾಗೂ ಪುರಸಭಾ, ಪಶು ಇಲಾಖೆ ಅಧಿಕಾರಿಗಳು ಭಾಗವಹಿಸಿದ್ದರು.

### ಆಕರ್ಷಕ ಮೆರವಣಿಗೆಗೆ ಚಾಲನೆ

ಪುರಸಭಾ ಮುಂಭಾಗದಿಂದ ಆರಂಭಗೊಂಡ ರಾಸುಗಳ ಮೆರವಣಿಗೆಗೆ ಶಾಸಕ ಸಿ.ಎನ್. ಬಾಲಕೃಷ್ಣ ಸೇರಿದಂತೆ ಗಣ್ಯರು ಗೋಪೂಜೆ ಸಲ್ಲಿಸಿ ಚಾಲನೆ ನೀಡಿದರು. ಮಂಗಳ ವಾದ್ಯದೊಂದಿಗೆ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ರಾಸುಗಳ ಮೆರವಣಿಗೆ ನಡೆಸಿ, ಎಪಿಎಂಸಿ ಆವರಣದಲ್ಲಿ ದನಗಳ ಜಾತ್ರೆ ನಡೆಯುವ ಸ್ಥಳಕ್ಕೆ ಕರೆತರಲಾಯಿತು. ಹಾಸನ ಜಿಲ್ಲೆ ಮಾತ್ರವಲ್ಲದೇ ಹೊರ ಜಿಲ್ಲೆಗಳಿಂದಲೂ ರೈತರು ತಮ್ಮ ರಾಸುಗಳನ್ನು ಕರೆತಂದು ರಾಸುಗಳ ಕೊಂಬಿಗೆ ಹೂವಗಳನ್ನು ಕಟ್ಟಿ ಸಿಂಗರಿಸಲಾಗಿತು.

# ಹಾಸನಾಂಬೆ ಪುರಾಣ ಪಠಣ ಯಶಸ್ವಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಲೋಕ ಕಲ್ಯಾಣಕ್ಕಾಗಿ ಹಾಗೂ ಮಳೆ, ಬೆಳೆ ಸಮೃದ್ಧಿಯಾಗಿ ಜನಸಾಮಾನ್ಯರ ಸುಖ-ಶಾಂತಿ ಹಾಗೂ ನೆಮ್ಮದಿಗಾಗಿ ಶುಕ್ರವಾರ ನಗರದ ಶ್ರೀ ಹಾಸನಾಂಬ ದೇವಾಲಯದಲ್ಲಿ ಸಾಮೂಹಿಕ 108ಕ್ಕೂ ಹೆಚ್ಚು ಜನರು ಶ್ರೀದೇವಿ ಪುರಾಣ ಪಠಣ, ಹೋಮ ನಡೆಸಿದರು.

ಇದೇ ವೇಳೆ ನಡೆದ ಧರ್ಮಸಭೆಯಲ್ಲಿ ಹಲವು ಮಠಾಧೀಶರು ಭಾಗಿಯಾಗಿ ಹಾಸನಾಂಬೆ ಮಹತ್ವವನ್ನು ಮನನ ಮಾಡಿದರು.

ರಾಯಚೂರಿನ ಉಮಳಿ ಹೊಸುರು ಹಿರೇಮಠದ ಕಿಡಿಗಣ್ಣಯ್ಯ ಮಹಾಸ್ವಾಮೀಜಿ ಸೇರಿ ಹಲವು ಮಠಾಧೀಶರು ಇದರಲ್ಲಿ ಭಾಗಿಯಾಗಿದ್ದರು. ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ತಾಲ್ಲೂಕು ಘಟಕ ಹಾಗೂ ಇತರರು ಎಲ್ಲ ರೀತಿಯ ಸಹಕಾರ ನೀಡಿದ್ದರು.

ರಾಜ್ಯದ ವಿವಿಧೆಡೆಗಳಿಂದ ಆಗಮಿಸಿದ್ದ 108ಕ್ಕೂ ಹೆಚ್ಚು ಮಂದಿ ಶ್ರೀದೇವಿ ಉಪಾಸಕರು ಸಾಮೂಹಿಕವಾಗಿ ಶ್ರೀ ದೇವಿ ಪುರಾಣ ಪಠಣ ಹಾಗೂ ಹೋಮದಲ್ಲಿ ಭಾಗವಹಿಸಿದ್ದರು.

ಪ್ರಕೃತಿ ಸಮ್ಮಿಲನ, ಉತ್ತಮ ಮಳೆ, ಸಮೃದ್ಧ ಬೆಳೆ, ಸಮಾಜದಲ್ಲಿ ಶಾಂತಿ ಮತ್ತು ಸೌಹಾರ್ದತೆ ನೆಲೆಯೂರಲಿ ಎಂದು ಎಲ್ಲರೂ ಸೇರಿ ಪ್ರಾರ್ಥಿಸಿದರು. ಧಾರ್ಮಿಕ ಮಂತ್ರೋಚ್ಚಾರಣೆಯೊಂದಿಗೆ ದೇವಾಲಯದ ವಾತಾವರಣ ಸಂಪೂರ್ಣವಾಗಿ ಆಧ್ಯಾತ್ಮಿಕತೆಯಿಂದ ತುಂಬಿ ತುಳುಕಿತ್ತು.

ವಿವಿಧ ಮಠಗಳ ಮಠಾಧೀಶರು ಕಾರ್ಯಕ್ರಮದಲ್ಲಿ ಭಾಗಿಯಾಗಿ ಉತ್ಸವದ ಘನತೆ ಹೆಚ್ಚಿಸಿದರು.

ಈ ಸಂದರ್ಭದಲ್ಲಿ ಸಮಾಜ ಸೇವಕ ಕಂಚಮಾರನಹಳ್ಳಿ ಕಾಂತಣ್ಣ, ವೀರಶೈವ ಲಿಂಗಾಯತ ಮಹಾಸಭಾ ತಾಲೂಕು ಅಧ್ಯಕ್ಷ ಕಟ್ಟಾಯ ಶಿವಕುಮಾರ, ಬಿಜೆಪಿ ಮುಖಂಡ ಪುನೀತ್‌ಗೌಡ, ಜಿಲ್ಲಾ ಚುಸಾಪ ಅಧ್ಯಕ್ಷ ಬಾ.ನಂ ಲೋಕೇಶ್ ಮೊದಲಾದವರು ಭಾಗಿಯಾಗಿದ್ದರು.

# ಇಂದು ಹೆಚ್.ಎಂ.ಶಿವಣ್ಣ ಅವರಿಗೆ ಶ್ರದ್ಧಾಂಜಲಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸ್ವಾತಂತ್ರ್ಯ ಹೋರಾಟಗಾರ ದಿ. ಹೆಚ್. ಎಂ.ಶಿವಣ್ಣ ಅವರಿಗೆ ಶ್ರದ್ಧಾಂಜಲಿ ಕಾರ್ಯಕ್ರಮವನ್ನು ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಫೆ. 7ರ ಶನಿವಾರ ಬೆಳಿಗ್ಗೆ 9.30ಕ್ಕೆ ಹಮ್ಮಿಕೊಳ್ಳಲಾಗಿದೆ.

ಶ್ರೀ ಅರುಣೋದಯ ವಿವೇಕಾನಂದ ವಿದ್ಯಾಸಂಸ್ಥೆ ಹಾಗೂ ಚಿಗಳ್ಳಿ ಆರ್.ಡಿ.ಗೌಡ ಅವರ ಸಹಯೋಗದಲ್ಲಿ ಕಾರ್ಯಕ್ರಮ ಏರ್ಪಡಿಸಿದ್ದು, ಇದೇ ಸಂದರ್ಭದಲ್ಲಿ ಮರ್ಕುಲಿ ಗ್ರಾಮದ ದಿ. ದ್ಯಾವೇಗೌಡ್ರ ಸಹೋದರಿ ಸಾತೇನಹಳ್ಳಿಯ ದಿ. ದ್ಯಾವಮ್ಮ ಕೃಷ್ಣೇಗೌಡ ಹಾಗೂ ಚಿಗಳ್ಳಿಯ ಆರ್.ಡಿ.ಗೌಡರ ಸಹೋದರಿ ದಿ. ನಾಗರತ್ನ ಮಂಜೇಗೌಡ ಅವರಿಗೂ ಶ್ರದ್ಧಾಂಜಲಿ ನೆರವೇರಲಿದೆ. ಕಾರ್ಯಕ್ರಮದ ಅಂಗವಾಗಿ ಶ್ರೀ ಲಕ್ಷ್ಮೀ ರಂಗನಾಥಸ್ವಾಮಿ ಸೌರಭ ಕಲಾ ಸಂಘದ ಮಹಿಳಾ ಕಲಾವಿದರಿಂದ ಧರ್ಮರಾಜ್ಯ ಸ್ಥಾಪನೆ ಪೌರಾಣಿಕ ನಾಟಕ ಪ್ರದರ್ಶನ ಏರ್ಪಡಿಸಲಾಗಿದೆ. ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ, ಜವೇನಹಳ್ಳಿ ಮಠದ ಶ್ರೀ ಸಂಗಮೇಶ್ವರ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಮಾಜಿ ಸಚಿವ ಹೆಚ್.ಡಿ.ರೇವಣ್ಣ ಸಮಾರಂಭ ಉದ್ಘಾಟಿಸಲಿದ್ದು ಶಾಸಕ ಹೆಚ್.ಪಿ.ಸ್ವರೂಪ್, ಅಧ್ಯಕ್ಷತೆ ವಹಿಸಲಿದ್ದಾರೆ.

ನಗರಸಭೆ ಮಾಜಿ ಅಧ್ಯಕ್ಷ ಚನ್ನವೀರಪ್ಪ, ಕಮಲ್‌ಕುಮಾರ್, ಪಿ.ಎಂ. ಗುರುಮೂರ್ತಿ ಹಾಗೂ ಬಿ.ಎಸ್.ಪುಟ್ಟಸ್ವಾಮಿಗೌಡ ಭಾಗವಹಿಸಲಿದ್ದಾರೆ.

# ಗೃಹರಕ್ಷಕರು-ಕುಟುಂಬಗಳ ಹಲವು ಬೇಡಿಕೆ

## ತೆಲಂಗಾಣ-ಆಂಧ್ರ ಮಾದರಿಯಲ್ಲಿ ಈಡೇರಿಸುವಂತೆ ಆಗ್ರಹಿಸಿ ಸರ್ಕಾರಕ್ಕೆ ಮನವಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ತೆಲಂಗಾಣ ಮತ್ತು ಆಂಧ್ರ ಪ್ರದೇಶ ಮಾದರಿಯಲ್ಲಿ ಗೃಹ ರಕ್ಷಕರ ಕುಟುಂಬಗಳಿಗೆ ನಿರಂತರ ಕರ್ತವ್ಯ ಹಾಗೂ ಹಾಗೂ ಸಮನಾದ ವೇತನ ನೀಡುವಂತೆ ಕೋರಿ ಲೇಬರ್ ರೈಟ್ಸ್ ಫೋರಂನವರು ಇಂದು ತಹಸೀಲ್ದಾರ್ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ರಾಜ್ಯದಲ್ಲಿ 21,327 ಪುರುಷ ಗೃಹ ರಕ್ಷಕರು, 4555 ಮಹಿಳಾ ಗೃಹ ರಕ್ಷಕಿಯರು 426 ಘಟಕಗಳಲ್ಲಿ ಚುನಾವಣಾ ಬಂದೋಬಸ್ತ್, ಹಬ್ಬ-ಹರಿದಿನ, ಜಾತ್ರಾ ಬಂದೋಬಸ್ತ್ ಮತ್ತು ಹೊರ ರಾಜ್ಯಗಳ ಚುನಾವಣೆ ಸೇರಿದಂತೆ ಇನ್ನೂ ಅನೇಕ ತುರ್ತು ಸಂದರ್ಭಗಳಲ್ಲಿ 60 ವರ್ಷಗಳಿಂದ ಕರ್ತವ್ಯ ಮಾಡಿಕೊಂಡು ಬಂದಿದ್ದಾರೆ.

ಇವರಿಗೆ ಸರ್ಕಾರದ ಯಾವುದೇ ಸೌಲಭ್ಯಗಳಿಲ್ಲ. ಇದರಿಂದ ಅವರ ಕುಟುಂಬ ಹಾಗೂ ಪೋಷಕರಿಗೂ ಔಷಧಿ ಉಪಚಾರ ಕೊಡಿಸುವುದು ಕಷ್ಟವಾಗಿದೆ ಎಂದು ಅಳಲು ತೋಡಿಕೊಂಡರು.



ಎಲ್ಲ ಇಲಾಖೆಗಳ ನೌಕರರಂತೆ ನಾವೂ ಕರ್ತವ್ಯ ನಿರ್ವಹಿಸುತ್ತಿದ್ದು, ತಾರತಮ್ಯ ಮಾಡದೆ ಏಕರೂಪದ ವೇತನ ನೀಡಬೇಕು. ಅವರ ಕುಟುಂಬಗಳಿಗೆ ಸೇವಾ ಭದ್ರತೆ ನೀಡಬೇಕು.

ರಾಜ್ಯದ ಬೆಂಗಳೂರು ಹಾಗೂ ಇನ್ನಿತರೆ ಜಿಲ್ಲೆಗಳಲ್ಲಷ್ಟೇ ಕೇವಲ 10 ಸಾವಿರ ಸಂಖ್ಯೆಯಲ್ಲಿ ಕರ್ತವ್ಯ ಇದ್ದು, ತಾಲೂಕು, ಗ್ರಾಮೀಣ ಸ್ಥಳಗಳಲ್ಲಿ ಕರ್ತವ್ಯಗಳಿಲ್ಲದೆ ಕಷ್ಟ ಪಡುತ್ತಿದ್ದಾರೆ. ಕೇವಲ 18 ಸಾವಿರ ನಿರಂತರ ಕರ್ತವ್ಯ ನೀಡಿದರೆ 28 ಸಾವಿರ ಗೃಹ ರಕ್ಷಕರ ಕುಟುಂಬಗಳಿಗೆ ಬದುಕು ಕಟ್ಟಿಕೊಟ್ಟಂತಾಗುತ್ತದೆ ಎಂದು ಮನವಿ ಮಾಡಿದರು.

ಸರ್ಕಾರವು ಗೃಹರಕ್ಷಕರು ಕರ್ತವ್ಯದಲ್ಲಿ ಮರಣ ಹೊಂದಿದರೆ ಅಥವಾ ಅಪಘಾತ ಚಿಕಿತ್ಸೆ ಗೆ ಲಕ್ಷದಿಂದ 10 ಲಕ್ಷದವರೆಗೆ ಮಾಡಿರುವುದಕ್ಕೆ ಸಂತಸ ವ್ಯಕ್ತಪಡಿಸಿದರು. ನಮ್ಮ ಮನವಿ ಎಂದರೆ ತೆಲಂಗಾಣ ಮತ್ತು ಆಂಧ್ರ ಇನ್ನಿತರೆ 18 ರಾಜ್ಯಗಳಲ್ಲಿ ಗೃಹರಕ್ಷಕರಿಗೆ ನಿರಂತರ ವರ್ಷವಿಡೀ ಕರ್ತವ್ಯ ನೀಡಿ 30 ಸಾವಿರ ವೇತನ ನೀಡಿ ಕೆಲವು ಸೌಕರ್ಯಗಳನ್ನೂ ನೀಡಿ ಅವರ ಕುಟುಂಬಕ್ಕೆ ಜೀವನೋಪಾಯ ಕಲ್ಪಿಸಿ ಕೊಟ್ಟಿದ್ದಾರೆ.

ಅದೇ ರೀತಿ ನಮ್ಮ ರಾಜ್ಯದಲ್ಲಿ ಗೃಹ ರಕ್ಷಕರ ಕುಟುಂಬಗಳಿಗೆ ನಿರಂತರ ವರ್ಷಪೂರ್ತಿ ಕರ್ತವ್ಯ ನೀಡಬೇಕು. ಕರ್ತವ್ಯ ನಿರ್ವಹಿಸಿ ಮನೆಗೆ ತೆರಳುವಾಗ ಮತ್ತು ಕರ್ತವ್ಯಕ್ಕೆ ಬರುವಾಗ ಹೆಚ್ಚು ಸಂಖ್ಯೆಯಲ್ಲಿ ಗೃಹ ರಕ್ಷಕರು ಅಪಘಾತದಲ್ಲಿ ಮರಣ ಹೊಂದಿದ್ದರೂ ಅವರ ಕುಟುಂಬಕ್ಕೆ ಸೇವಾ ಭದ್ರತೆ ಬಂದಿಲ್ಲ. ಇದಕ್ಕೆ ಕರ್ತವ್ಯ ಸಮಯದಲ್ಲಿ ಮೃತಪಟ್ಟರೆ ಮಾತ್ರ ಎಂಬ ಆದೇಶವೇ ಕಾರಣ, ಅದಕ್ಕಾಗಿ ತಿದ್ದುಪಡಿ ಮಾಡುವಂತೆ ಮನವಿ ಮಾಡಿದರು.

ತೆಲಂಗಾಣ, ಆಂಧ್ರ ಮಾದರಿ 365 ದಿನ ಕರ್ತವ್ಯ ನೀಡಬೇಕು. ಏಕರೂಪ ವೇತನ ನೀಡಬೇಕು. ಗೃಹರಕ್ಷಕರ ಕುಟುಂಬ ಅಪಘಾತದಿಂದ ಮೃತಪಟ್ಟರೆ ಅವರ ಕುಟುಂಬಗಳಿಗೆ ಸೇವಾ ಭದ್ರತೆ ನೀಡಬೇಕು, ನಿವೃತ್ತಿ ಆದಾಗ 20 ಲಕ್ಷ ಇಡಿ ಗಂಟು ನೀಡಬೇಕು. ಮಹಿಳಾ ರಜೆ ಗೃಹರಕ್ಷಕಿಯರಿಗೂ ಸಿಗಬೇಕು. ಉಚಿತ ಬಸ್ ಪಾಸ್ ನೀಡಬೇಕು ಎಂದು ಸಂಘದ ಸಂಸ್ಥಾಪಕ ಅಧ್ಯಕ್ಷ ಪಾವಗಡ ಶ್ರೀರಾಮ್ ಮೊದಲಾದವರು ಒತ್ತಾಯಿಸಿದರು.

# 15 ಲಕ್ಷ ರೂ. ವೆಚ್ಚದ ರಸ್ತೆ ಕಾಮಗಾರಿಗೆ ಚಾಲನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಅಗಲಹಳ್ಳಿ ಜೆಜೆಎಂ ನೀರಿನ ಟ್ಯಾಂಕ್ ಹಾಗೂ ಸಾಣೇನಹಳ್ಳಿ ಗ್ರಾಮಗಳಲ್ಲಿ 15 ಲಕ್ಷ ವೆಚ್ಚದ ರಸ್ತೆ ಕಾಮಗಾರಿಗಳಿಗೆ ಇಂದು ಸ್ಥಳೀಯ ಶಾಸಕ ಹೆಚ್.ಪಿ.ಸ್ವರೂಪ್ ಪ್ರಕಾಶ್ ಗುದ್ದಲಿಪೂಜೆ ನೆರವೇರಿಸಿದರು.

ಗ್ರಾಮದ ಮುಖಂಡರು ಹಾಗೂ ಅಧಿಕಾರಿಗಳ ಸಮ್ಮುಖದಲ್ಲಿ ಗುದ್ದಲಿ ಪೂಜೆ ನೆರವೇರಿಸಿದ ಶಾಸಕರು, ಶೀಘ್ರವಾಗಿ ಕಾಮಗಾರಿ ಮುಗಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಬೇಕು ಹಾಗೂ ಕಾಮಗಾರಿಯಲ್ಲಿ ಗುಣಮಟ್ಟ ಕಾಯ್ದುಕೊಳ್ಳಬೇಕು ಎಂದು ಅಧಿಕಾರಿಗಳು, ಗುತ್ತಿಗೆದಾರರಿಗೆ ಸೂಚನೆ ನೀಡಿದರು.

# ಸಚಿವ ಡಾ. ಜಿ.ಪರಮೇಶ್ವರ್‌ಗೆ ಹಿರೀಸಾವೆಯಲ್ಲಿ ಸ್ವಾಗತ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಹಿರೀಸಾವೆ ಗ್ರಾಮದಲ್ಲಿ ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಹೆಚ್ಚುವರಿ ಅನುದಾನ ನೀಡಲಾಗುವುದೆಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಭರವಸೆ ನೀಡಿದರು. ಶುಕ್ರವಾರ ಬೆಂಗಳೂರಿನಿಂದ ಚಿಕ್ಕಮಗಳೂರಿಗೆ ತೆರಳುತ್ತಿದ್ದ ಅವರನ್ನು ಹಿರೀಸಾವೆಯಲ್ಲಿ ಕಾಂಗ್ರೆಸ್ ಮುಖಂಡರು ಹಾಗೂ ಅಭಿಮಾನಿಗಳು ಸ್ವಾಗತಿಸಿದರು.

ಈ ವೇಳೆ ಮಾತನಾಡಿದ ಸಚಿವರು, ಅಂಬೇಡ್ಕರ್ ವೃತ್ತದಲ್ಲಿ ಅಂಬೇಡ್ಕರ್ ಪ್ರತಿಮೆ ಶಂಕುಸ್ಥಾಪನೆಗೆ ದಿನಾಂಕ ನಿಗದಿಪಡಿಸಲಾಗುವುದು. ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಸರ್ಕಾರದಿಂದ 75 ಲಕ್ಷ ರೂ. ಅನುದಾನ ಬಿಡುಗಡೆಯಾಗಿದೆ. ಗುಣಮಟ್ಟದ ಕಾಮಗಾರಿಗೆ ಆದ್ಯತೆ ನೀಡಬೇಕು. ಹೆಚ್ಚುವರಿ ಅನುದಾನ ಬೇಕಿದ್ದರೆ ಕಲ್ಪಿಸಲಾಗುವುದು ಎಂದರು.

ರಾಜ್ಯದ ವಿವಿಧಡೆ ನಿರ್ಮಾಣ ಹಂತದಲ್ಲಿರುವ ಅಂಬೇಡ್ಕರ್ ಪುತ್ಥಳಿ ಹಾಗೂ ಭವನ ಕಾಮಗಾರಿಗೆ ಸರ್ಕಾರದಿಂದ ಹಂತ ಹಂತವಾಗಿ ಅನುದಾನ ಬಿಡುಗಡೆ ಮಾಡಲಾಗುತ್ತಿದೆ. ನಿರ್ಮಾಣ ಕಾರ್ಯವು ಪ್ರಗತಿಯಲ್ಲಿ ಸಾಗುತ್ತಿದ್ದು ವರ್ಷಾಂತ್ಯದಲ್ಲಿ ಲೋಕಾರ್ಪಣೆಗೊಳ್ಳಲಿವೆ ಎಂದು ತಿಳಿಸಿದರು. ಡಾ. ಜಿ.ಪರಮೇಶ್ವರ್ ಯುವಕರ ಸಂಘದ ಜಿಲ್ಲಾಧ್ಯಕ್ಷ ಮಂಜುನಾಥ ಮೌರ್ಯ, ಹೊಸಹಳ್ಳಿ ಅಣ್ಣಯ್ಯ, ಕಾಂಗ್ರೆಸ್ ಮುಖಂಡರಾದ ಉದಯಕುಮಾರ್, ಮಹೇಶ್, ದಲಿತಪರ ಸಂಘಟನೆಗಳ ಕಾರ್ಯಕರ್ತರು ಹಾಜರಿದ್ದರು.






# ರಂಗೇನಹಳ್ಳಿ ಏತ ನೀರಾವರಿ ಯೋಜನೆಗೆ ಅಧಿಕಾರಿಗಳ ನಿರ್ಲಕ್ಷ್ಯ

## ಶಾಸಕ ಎ.ಮಂಜು ಆರೋಪ | ಇನ್ನಾದರೂ ಎಚ್ಚೆತ್ತುಕೊಳ್ಳಲು ಸಲಹೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ತಾಲೂಕಿನ ಹಳ್ಳಿಮೈಸೂರು ಹೋಬಳಿಯ 22 ಗ್ರಾಮದ ಕರೆಕಟ್ಟೆಗಳಿಗೆ ಜೀವ ಜಲವಾಗಬೇಕಿರುವ ರಂಗೇನಹಳ್ಳಿ ಏತ ನೀರಾವರಿ ಅಧಿಕಾರಿಗಳ ನಿರ್ಲಕ್ಷದಿಂದ ಅಪೂರ್ಣವಾಗಿಲ್ಲ ಎಂದು ಅರಕಲಗೂಡು ಶಾಸಕ ಎ.ಮಂಜು ಆರೋಪಿಸಿದರು.



ತಾಲೂಕಿನ ದೊಡ್ಡಕಾಡನೂರು ಗ್ರಾಮದ ನೀರಾವರಿ ಇಲಾಖೆಯ ಉಪವಿಭಾಗದ ಕಚೇರಿಯಲ್ಲಿ ರಂಗೇನಹಳ್ಳಿ ಏತನೀರಾವರಿ ಯೋಜನೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿ, 8 ವರ್ಷದ ಹಿಂದೆ 43 ಕೋಟಿ ರೂ. ವೆಚ್ಚದಲ್ಲಿ ಕಾಮಗಾರಿ ಕೈಗೆತ್ತಿಕೊಳ್ಳಲಾಗಿತ್ತು. ಒಂದೂವರೆ ವರ್ಷದಲ್ಲಿ ಮುಗಿಯಬೇಕಿದ್ದ ಕಾಮಗಾರಿ ಇಂದಿಗೂ ಪೂರ್ಣಗೊಂಡಿಲ್ಲ.

ಇದೀಗ ವಿಧಾನ ಸಭಾ ಅಧಿವೇಶನದಲ್ಲಿ 2.5 ಕೋಟಿ ರೂ. ಹೆಚ್ಚುವರಿ ಅನುದಾನ ಬಿಡುಗಡೆಯಾಗಿದೆ. ಯೋಜನೆ ವ್ಯಾಪ್ತಿಯಲ್ಲಿ 7 ರೈತರು ತಮ್ಮ ಭೂಮಿಗೆ ಪರಿಹಾರಕ್ಕಾಗಿ ಬೇಡಿಕೆ ಮುಂದಿಟ್ಟಿದ್ದಾರೆ. ಅವರಿಗೆ ಮಾಹಿತಿ ಕೊರತೆ ಇದೆ.

ಈ ವರೆಗೆ ಭೂಮಿ ನೀಡಿದ ರೈತರಿಗೆ ಕೊಡುವಂತೆ ಸೂಕ್ತ ಪರಿಹಾರ ನೀಡಲಾಗುವುದು. ಈ ಬಗ್ಗೆ ಸಂಶಯ ಬೇಡ. ಇಂಜಿನಿಯರ್‌ಗಳು ಮತ್ತು ಆಭಾಗದ ಜನಪ್ರತಿನಿಧಿಗಳು ರೈತರ ಮನವೊಲಿಸಬೇಕು. ಕೆ.ಆರ್.ಪೇಟೆ ವ್ಯಾಪ್ತಿಯ ಬೇವಿನಹಳ್ಳಿ ಗ್ರಾಮದ ಸಮೀಪ ಹೇಮಾವತಿ ನದಿಯಿಂದ ಜಾಕ್‌ವೆಲ್ ಮೂಲಕ ಏತ ನೀರಾವರಿಗೆ ನೀರು ಹರಿಸಬೇಕಿದೆ. ಆ ಭಾಗದ ಸರ್ಕಾರಿ ಭೂಮಿ ಸರ್ವೇ ಕಾರ್ಯ ನಡೆಯಬೇಕಿದೆ. ಜರೂರಾಗಿ ಈ ಕೆಲಸಗಳನ್ನು ಮಾಡುವ ಮೂಲಕ ಅಧಿಕಾರಿಗಳು ಮುಂದಿನ 2 ತಿಂಗಳೊಳಗೆ ಯೋಜನೆ ಪೂರ್ಣಗೊಳಿಸುವಂತೆ ತಾಕೀತು ಮಾಡಿದರು.

> ಕಲ್ಲೊಡ್ಡೆಬಾರೆ ಕಾವಲು ಮೀಸಲು ಅರಣ್ಯ ಪ್ರದೇಶದಲ್ಲಿ ಅಕ್ರಮ ಗಣಿಗಾರಿಕೆ ನಡೆದಿರುವ ವಿಚಾರ ಕುರಿತು ವಿಧಾನ ಸಭೆಯಲ್ಲಿ ಪ್ರಸ್ತಾಪಿಸಲಾಗಿದೆ. ಮೈಸೂರು ಮಹಾರಾಜರು ಈ ಪ್ರದೇಶವನ್ನು ಜಾನುವಾರು ಮೇಯಿಸಲು ಮೀಸಲಿರಿಸಿದ್ದರು. ಅಕ್ರಮ ಗಣಿಗಾರಿಕೆಯಿಂದ ಮನೆಗಳಿಗೆ ಬಿರುಕು, ಪರಿಸರ ಹಾನಿ, ಸುತ್ತಮುತ್ತಲಿನ ಬೆಳೆ ಬೆಳೆಯಲಾಗದ ಪರಿಸ್ಥಿತಿ ನಿರ್ಮಾಣವಾಗಿದೆ. ಸ್ಥಳಕ್ಕೆ ಅಧಿಕಾರಿಗಳ ತಂಡ ಭೇಟಿ ನೀಡಿ ಸರ್ಕಾರಕ್ಕೆ ವರದಿ ಸಲ್ಲಿಸಲಿದೆ.
>
> **- ಎ.ಮಂಜು, ಶಾಸಕ**

ನೀರಾವರಿ ಇಲಾಖೆಯ ಎಇಇ ಕೇಶವಮೂರ್ತಿ, ಎಇ ರಾಜೇಶ್, ಕಂದಾಯ ಇಲಾಖೆ ಅಧಿಕಾರಿ ಜಯಲಕ್ಷ್ಮಿ, ಜೆಡಿಎಸ್ ತಾಲೂಕು ಅಧ್ಯಕ್ಷ ಎಚ್.ಎಸ್.ಪುಟ್ಟಸ್ವಾಮಪ್ಪ, ಜಿಪಂ ಮಾಜಿ ಸದಸ್ಯ ಸಾಂಬಸದಾಶಿವಪ್ಪ ಹಾಜರಿದ್ದರು.

### ಶಾಸಕ ಶಿವಲಿಂಗೇಗೌಡರಿಂದ ಅಪದ್ಧ ಪದ ಬಳಕೆ: ಖಂಡನೆ

ಇನ್ನೊಬ್ಬರನ್ನು ತೇಜೋವಧೆ ಮಾಡುವಾಗ ನಾನು ಏನು ಎಂಬ ಪರಿಜ್ಞಾನ ಇರಬೇಕೆಂದು ಅರಸೀಕೆರೆ ಶಾಸಕ ಕೆ.ಎಂ.ಶಿವಲಿಂಗೇಗೌಡರಿಗೆ ಎ.ಮಂಜು ಟಾಂಗ್ ನೀಡಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಹಿಳಾ ತಹಶೀಲ್ದಾರ್ ಅಕ್ರಮವಾಗಿ ಹಣ ಮಾಡುತ್ತಿದ್ದಾರೆಂದು ಸದನದಲ್ಲಿ ಆರೋಪಿಸಿರುವ ಶಾಸಕ ಕೆ.ಎಂ.ಶಿವಲಿಂಗೇಗೌಡ ತಾಕತ್ತಿದ್ದರೆ ದೂರು ನೀಡಿ ತನಿಖೆಗೆ ಆಗ್ರಹಿಸಲಿ. ಇನ್ನೊಬ್ಬರ ಬಗ್ಗೆ ವೈಯಕ್ತಿಕವಾಗಿ ಮಾತನಾಡುವ ಮುನ್ನ ನಾ ಯಾರು, ನನ್ನ ಅಪ್ಪ ಯಾರು, ನನ್ನ ರಾಜಕೀಯ ಹಿನ್ನಲೆ ಏನು, ನನಗೆ ಯಾರ ಕೃಪಕಟಾಕ್ಷ ಇತ್ತು, ನಾ ಏನು ಮಾಡುತ್ತಿದ್ದೆ ಎಂಬುದನ್ನು ಅರಿತಿರಬೇಕು. ಸಾರ್ವಜನಿಕ ಜೀವನದಲ್ಲಿ ಹೇಗಿರಬೇಕೆಂಬ ಅರಿವು ವ್ಯಕ್ತಿಗೆ ಇರಬೇಕು. ಶಾಸಕರಾಗಿ ಸಮಾಜಕ್ಕೆ ಏನು ಸಂದೇಶ ನೀಡುತ್ತಿದ್ದೇವೆಂದು ಯೋಚಿಸಬೇಕಿತ್ತು ಎಂದು ವಾಗ್ದಾಳಿ ನಡೆಸಿದರು. ಅಧಿವೇಶನದಲ್ಲಿ ಶಾಸಕ ಶಿವಲಿಂಗೇಗೌಡರ ಭಾಷಣ ಒಪ್ಪುವಂತದ್ದಲ್ಲ. ಶಾಸಕ ಶರಣು ಸಲಗಾರ ಅವರ ಪತ್ನಿ ಹಣ ಪಡೆಯುತ್ತಿರುವ ದಾಖಲೆಗಳಿದ್ದರೆ ದೂರು ನೀಡಬಹುದು. ಸಂಪುಟದಲ್ಲಿ ತನಗೂ ಅವಕಾಶ ಸಿಗಲಿ ಎಂಬ ಆಸೆಯಿಂದ ಹಾಗೆ ಮಾತನಾಡಿರಬಹುದೆಂದು ವ್ಯಂಗ್ಯವಾಡಿದರು.

ಯಾರೇ ಆಗಲಿ ಪದ ಬಳಕೆ ಮಾಡುವಾಗ ಎಚ್ಚರ ವಹಿಸಬೇಕಾಗುತ್ತದೆ. ಕಲಾಪ ವೀಕ್ಷಿಸಲು ಶಾಲಾ ಮಕ್ಕಳು ಬಂದಿರುತ್ತಾರೆಂಬ ಪರಿಜ್ಞಾನ ಇರಬೇಕು. ಮಕ್ಕಳು ನಮ್ಮ ಬಗ್ಗೆ ಏನು ತಿಳಿದುಕೊಳ್ಳುತ್ತಾರೆ, ಶಾಸಕರ ಯೋಗ್ಯತೆ ಇಷ್ಟೇ ಎಂದು ಭಾವಿಸುತ್ತಾರೆ ಎಂದರು.

## ಅಖಿಲ ಭಾರತ ಬ್ರಾಹ್ಮಣ ಮಹಾಸಂಘದ ಜಿಲ್ಲಾ ಪದಾಧಿಕಾರಿಗಳ ನೇಮಕ






**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಅಖಿಲ ಭಾರತ ಬ್ರಾಹ್ಮಣ ಮಹಾಸಂಘದ ಹಾಸನ ಜಿಲ್ಲಾ ಘಟಕದ ಜಿಲ್ಲಾಧ್ಯಕ್ಷರಾಗಿ ನಿಟ್ಟೂರು ಜಯರಾಮ್ ಅವರನ್ನು ಆಯ್ಕೆ ಮಾಡಲಾಗಿದೆ.

ಅದೇ ರೀತಿ ಜಿಲ್ಲಾ ಘಟಕದ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾಗಿ ಮಂಜುಳಾ ಮಧುಸೂಧನ್, ಮಾಧವ ನಾರಾಯಣ್ ಹಾಗೂ ನರಸಿಂಹ ಶರ್ಮ ಅವರನ್ನು ಆಯ್ಕೆ ಮಾಡಲಾಗಿದೆ.

ಸಂಘದ ರಾಜ್ಯ ಮಟ್ಟದ ಕಾರ್ಯಕಾರಿ ಸಮಿತಿಯ ತೀರ್ಮಾನದಂತೆ ಈ ಆಯ್ಕೆ ಮಾಡಲಾಗಿದ್ದು, ನೂತನ ಪದಾಧಿಕಾರಿಗಳು ಸಮಾಜದ ಸಂಘಟನೆ, ಸಾಂಸ್ಕೃತಿಕ ಅಭಿವೃದ್ಧಿ ಹಾಗೂ ಸೇವಾ ಚಟುವಟಿಕೆಗಳನ್ನು ಇನ್ನಷ್ಟು ಬಲಪಡಿಸುವಲ್ಲಿ ಮಹತ್ವದ ಪಾತ್ರ ವಹಿಸುವ ವಿಶ್ವಾಸವನ್ನು ಸಂಘ ವ್ಯಕ್ತಪಡಿಸಿದೆ ಎಂದು ಅಖಿಲ ಭಾರತ ಬ್ರಾಹ್ಮಣ ಮಹಾಸಂಘದ ರಾಜ್ಯ ಕಾರ್ಯದರ್ಶಿ ಎಸ್.ಕೆ. ವೇಣುಗೋಪಾಲ್ ತಿಳಿಸಿದ್ದಾರೆ.

## ಹಣಕ್ಕಾಗಿ ಹಿಂಸೆ ಮನನೊಂದು ಆತ್ಮಹತ್ಯೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ಚೀಟಿ ಹಣ ಕೊಡದೆ ಸತಾಯಿಸಿದ್ದು ಮಾತ್ರವಲ್ಲದೆ ವಾಪಾಸ್ ಹಣ ಕೊಡುವಂತೆ ಬೆದರಿಸಿ ನಿಂದಿಸಿದ್ದಕ್ಕೆ ಮನನೊಂದ ವ್ಯಕ್ತಿ ವಿಷ ಸೇವಿಸಿ ಆತ್ಮಹತ್ಯೆಗೆ ಶರಣಾಗಿರುವ ಘಟನೆ ಪಟ್ಟಣದಲ್ಲಿ ನಡೆದಿದೆ.

ಪಟ್ಟಣದ ರಾಮು (38) ಮೃತರು. ಚನ್ನರಾಯಪಟ್ಟಣದಲ್ಲಿ ಹಲವು ವರ್ಷಗಳಿಂದ ವ್ಯಾಪಾರ ಮಾಡಿಕೊಂಡಿದ್ದ ಅವರು ಪರಿಚಯಸ್ಥರಾದ ಗಿರೀಶ್, ರಾಣಿ ಮತ್ತು ಪುಷ್ಪ ಎಂಬುವವರೊಟ್ಟಿಗೆ ಆರ್ಥಿಕ ವ್ಯವಹಾರ ಇಟ್ಟುಕೊಂಡಿದ್ದರು. 15 ಲಕ್ಷ ರೂ. ಮೊತ್ತದ ಚೀಟಿ ನಡೆಸುತ್ತಿದ್ದರು ಎನ್ನಲಾಗಿದೆ.

ಎರಡೂವರೆ ವರ್ಷಗಳಿಂದ ಚೀಟಿ ಹಣವನ್ನು ರಾಮು ನಗದು ಹಾಗೂ ಯುಪಿಐ ಮೂಲಕ ನಿಯಮಿತವಾಗಿ ಪಾವತಿಸುತ್ತಿದ್ದರು. 2025ರ ನ. 25 ರಂದು 15 ಲಕ್ಷ ರೂ. ಚೀಟಿಯನ್ನು 2.70 ಲಕ್ಷ ರೂ.ಗೆ ಕೂಗಿದ್ದರು. ಅದರಲ್ಲಿ 1 ಲಕ್ಷ ರೂ.ಗಳನ್ನು ನಗದು ರೂಪದಲ್ಲಿ ಖಾಲಿ ಚೆಕ್ ಹಾಗೂ ಬಾಂಡ್ ಪೇಪರ್‌ಗೆ ಸಹಿ ಹಾಕಿಸಿಕೊಂಡು ನ. 25ರಂದು ಕೊಟ್ಟಿದ್ದ ಗಿರೀಶ್, ಪುಷ್ಪ ಹಾಗು ರಾಣಿ ಅವರು ಉಳಿದ 1.70 ಲಕ್ಷ ರೂ. ಕೊಟ್ಟಿರಲಿಲ್ಲ. ಅದನ್ನು ಕೇಳಲು ಹೋದಾಗ ನೀವೇ 10 ಲಕ್ಷ ರೂ. ಕೊಡಬೇಕು ಎಂದು ಎಚ್ಚರಿಕೆ ನೀಡಿದ್ದರು. 20 ದಿನಗಳ ಹಿಂದೆ ರಾಮು ಕೆಲಸ ಮಾಡುತ್ತಿದ್ದ ಸ್ಥಳಕ್ಕೆ ಬಂದಿದ್ದ ಅವರು ಗಲಾಟೆ ಮಾಡಿ ಬ್ಯಾಂಕ್‌ನಲ್ಲಿ ಅಡವಿಟ್ಟಿರುವ ಒಡವೆ ಚೀಟಿಯನ್ನು ಕಿತ್ತುಕೊಂಡು ಹೋಗಿದ್ದರು. ಅಷ್ಟು ಮಾತ್ರವಲ್ಲದೆ ಅವಾಚ್ಯ ಶಬ್ದಗಳಿಂದ ನಿಂದಿಸಿ ಹಣ ಕೊಡದಿದ್ದರೆ ಕೊಲೆ ಮಾಡುತ್ತೇವೆಂದು ಬೆದರಿಕೆ ಹಾಕಿದ್ದರು ಎನ್ನಲಾಗಿದೆ. ಈ ಅವಮಾನದಿಂದ ಮನನೊಂದ ರಾಮು ಗುರುವಾರ ತಮ್ಮ ಜಮೀನಿನಲ್ಲಿ ವಿಷ ಸೇವಿಸಿ ಮೃತಪಟ್ಟಿದ್ದಾರೆ. ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಉತ್ತೇನಹಳ್ಳಿಯಲ್ಲಿ ಹಾಡ ಹಗಲೇ ಮನೆಗಳವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಮನೆ ಬೀಗ ಮುರಿದು ಒಳನುಗ್ಗಿರುವ ಕಳ್ಳರು ನಗದು ಸೇರಿ 1.14 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕದ್ದಿರುವ ಘಟನೆ ತಾಲ್ಲೂಕಿನ ಉತ್ತೇನಹಳ್ಳಿ ಗ್ರಾಮದಲ್ಲಿ ಹಾಡ ಹಗಲೇ ನಡೆದಿದೆ. ಗ್ರಾಮದ ಸುರೇಶ್ ಅವರು ಗುರುವಾರ ತಮ್ಮ ಪತ್ನಿಗೆ ಆರೋಗ್ಯದಲ್ಲಿ ವ್ಯತ್ಯಯ ಉಂಟಾದ್ದರಿಂದ ಉದಯಪುರ ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದರು. ಸಂಜೆ ಬಂದು ನೋಡಿದಾಗ ಮನೆ ಬಾಗಿಲು ಮುರಿದಿರುವುದು ಗೊತ್ತಾಗಿದೆ. ಬಲವಾದ ಆಯುಧದಿಂದ ಬಾಗಿಲು ಮುರಿದಿರುವ ಕಳ್ಳರು ಬೀರುವಿನಲ್ಲಿಟ್ಟಿದ್ದ 5 ಗ್ರಾಂನ ಒಂದು ಜೊತೆ ಚಿನ್ನದ ಓಲೆ, 5 ಗ್ರಾಂ ತೂಕದ ಒಂದು ಚಿನ್ನದ ಉಂಗುರ ಹಾಗೂ ಸ್ವಸಹಾಯ ಸಂಘದಲ್ಲಿ ಸಾಲವಾಗಿ ಪಡೆದಿದ್ದ 50 ಸಾವಿರ ರೂ. ನಗದು ಹಾಗೂ 200 ಗ್ರಾಂ ತೂಕದ ಬೆಳ್ಳಿ ಆಭರಣ ಕದ್ದಿದ್ದಾರೆ. ಕಳುವಾಗಿರುವ ಒಟ್ಟು ಪದಾರ್ಥಗಳ ಮೌಲ್ಯ 1.14 ಲಕ್ಷ ರೂ. ಆಗಿದೆ. ಶ್ರವಣಬೆಳಗೊಳ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸಚಿವರ ವಿರುದ್ಧ ತಮಟೆ ಚಳವಳಿ ಎಚ್ಚರಿಕೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸಕಲೇಶಪು-ಆಲೂರು ಕಟ್ಟಾಯ ವಿಧಾನಸಭಾ ಕ್ಷೇತ್ರದಲ್ಲಿ ಅನೇಕ ರೀತಿಯ ಕಾನೂನು ಬಾಹಿರ ಚಟುವಟಿಕೆ ನಡೆಯುತ್ತಿದ್ದು, ಈ ಸಂಬಂಧ ಜಿಲ್ಲಾ ಉಸ್ತುವಾರಿ ಸಚಿವರಿಗೆ ದೂರು ನೀಡಿದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ದಲಿತ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ದಿನೇಶ್ ಆರೋಪಿಸಿದರು.

ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಚಿವರ ನಿರ್ಲಕ್ಷ್ಯ ಹೀಗೆಯೇ ಮುಂದುವರಿದರೆ ಮುಂದೆ ಅವರು ಜಿಲ್ಲೆಗೆ ಭೇಟಿ ನೀಡಿದ ಸಂದರ್ಭದಲ್ಲಿ ತಮಟೆ ಚಳವಳಿ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಕಳೆದ ಎರಡೂವರೆ ವರ್ಷಗಳಿಂದ ಮೀಸಲು ಕ್ಷೇತ್ರದಲ್ಲಿ ಕಾನೂನು ಬಾಹಿರವಾಗಿ ಅಕ್ರಮ ಮರಳು ದಂಧೆ, ಅಕ್ರಮವಾಗಿ ಬೆಲೆ ಬಾಳುವ ಮರ ಸಾಗಣೆ, ಇಸ್ಪೀಟು-ಜೂಜು, ಗಾಂಜಾ, ಡ್ರಗ್ಸ್, ಮಟ್ಕಾ ಮಾಫಿಯಾ, ಕ್ರಿಕೆಟ್ ಬೆಟ್ಟಿಂಗ್ ಎಗ್ಗಿಲ್ಲದೇ ನಡೆಯುತ್ತಿದೆ ಎಂದು ದೂರಿದರು.

ಈ ಎಲ್ಲ ಅಕ್ರಮ ದಂಧೆಗಳು ನಿರಂತರವಾಗಿ ನಡೆಯಲು ಕಳೆದ ವಿಧಾನಸಭಾ ಚುನಾವಣೆಯ ಪರಾಜಿತ ಅಭ್ಯರ್ಥಿ ಮುರುಳಿ ಮೋಹನ್ ನೇರ ಕಾರಣ ಎಂದು ಬೊಟ್ಟು ಮಾಡಿದರು.

ಮೋಹನ್ ಅವರು ರಾಜ್ಯದಲ್ಲಿ ನಮ್ಮದೇ ಸರ್ಕಾರ ಇದೇ ಎಂದು ಹೇಳಿಕೊಂಡು ಎಲ್ಲ ಅಕ್ರಮಗಳಿಗೆ ಕುಮ್ಮಕ್ಕು ನೀಡುತ್ತಿದ್ದಾರೆ ಎಂದು ಆರೋಪಿಸಿದರು. ಈ ಮೂಲಕ ಇಡೀ ವ್ಯವಸ್ಥೆಯನ್ನು ಹಾಳು ಮಾಡುತ್ತಿದ್ದಾರೆ. ಇದರಿಂದ ಯುವಕರು, ಕಾಫಿ ಬೆಳೆಗಾರರ ಮಕ್ಕಳು ವಿವಿಧ ವ್ಯಸನಗಳಿಗೆ ದಾಸರಾಗಿ ಭವಿಷ್ಯ ಹಾಳು ಮಾಡಿಕೊಳ್ಳುತ್ತಿದ್ದಾರೆ ಎಂದು ವಿಷಾದಿಸಿದರು.

ವಿಪರ್ಯಾಸ ಎಂದರೆ ಈ ಎಲ್ಲ ಕಾನೂನು ಬಾಹಿರ ಚಟುವಟಿಕೆಗಳಿಗೆ ಪೊಲೀಸರೇ ಸಹಕಾರ ನೀಡುತ್ತಿದ್ದಾರೆ. ತಮ್ಮ ದಂಧೆ ನಡೆಸಲು ಅನುಕೂಲ ಆಗುವಂತೆ ಮುರುಳಿ ಮೋಹನ್ ಅವರು ತಮಗೆ ಬೇಕಾದ ಅಧಿಕಾರಿಗಳನ್ನು ನೇಮಿಸಿಕೊಂಡಿದ್ದಾರೆ ಎಂದು ಆಪಾದಿಸಿದರು.

ಈ ಎಲ್ಲದರ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರಿಗೆ ಅನೇಕ ಬಾರಿ ದೂರು ನೀಡಿದ್ದೇವೆ. ಆದರೂ ಯಾವುದೇ ಕ್ರಮ ಕೈಗೊಂಡಿಲ್ಲ. ಯಾರ ಮೇಲೂ ಶಿಸ್ತು ಕ್ರಮ ಜರುಗಿಸಿಲ್ಲ. ಇನ್ನಾದರೂ ಅಕ್ರಮ ಚಟುವಟಿಕೆಗಳಿಗೆ ಕಡಿವಾಣ ಹಾಕಿ, ಕ್ಷೇತ್ರದ ಜನರಿಗೆ ನ್ಯಾಯ ಒದಗಿಸಬೇಕು. ಇಲ್ಲದೇ ಇದ್ದರೆ ಸಚಿವರು ಜಿಲ್ಲೆಗೆ ಆಗಮಿಸಿದ ವೇಳೆ ದಲಿತ ಹಾಗೂ ಪ್ರಗತಿಪರ ಸಂಘಟನೆಗಳ ಒಕ್ಕೂಟದಿಂದ ತಮಟೆ ಚಳುವಳಿ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು. ಸುದ್ದಿಗೋಷ್ಠಿಯಲ್ಲಿ ರೈತ ಮುಖಂಡ ವಿಠಲ, ಮಧು, ಜಗದೀಶ್, ನಾಗರಾಜ್, ಚಂದ್ರು ಇದ್ದರು.

## ಫೆ.8ಕ್ಕೆ ಉದ್ಭವ ಶನೈಶ್ಚರಸ್ವಾಮಿ ದೇವಸ್ಥಾನದ ವಾರ್ಷಿಕೋತ್ಸವ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಅರಸೀಕೆರೆ ತಾಲೂಕು ಗಂಡಸಿ ಹೋಬಳಿ ಚಗಚಗೆರೆ ಗ್ರಾಮದ ಶ್ರೀ ಕ್ಷೇತ್ರ ಧರ್ಮಧ್ವಜ ಪ್ರತಿಷ್ಠಾನದ ವತಿಯಿಂದ ಶ್ರೀ ಉದ್ಭವ ಶನೈಶ್ಚರಸ್ವಾಮಿ ದೇವಸ್ಥಾನದ ವಾರ್ಷಿಕೋತ್ಸವ ಹಾಗೂ 42 ನೇ ವರ್ಷದ ಶಿವರಾತ್ರಿ ಮಹೋತ್ಸವ ಫೆ.8 ರಂದು ನಡೆಯಲಿದೆ ಎಂದು ಸಮಿತಿ ಅಧ್ಯಕ್ಷ ಅನಿಲ್ ಹೆಚ್.ಎ.ತಿಳಿಸಿದರು.

ಇಂದು ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು, ಈ ಉತ್ಸವಕ್ಕೆ ಶೃಂಗೇರಿ ಶಾರದಾ ಪೀಠದ ಕುಣಿಗಲ್ ತಾಲೂಕು ಹುಲಿಯೂರು ದುರ್ಗ ಹೋಬಳಿಯ ವಿದ್ಯಾ ಚೌಡೇಶ್ವರಿ ಅಮ್ಮನವರು, ಹಂಗರಹಳ್ಳಿ ಶ್ರೀ ಬಸವಣ್ಣ ದೇವರು ಆಗಮಿಸಲಿವೆ ಎಂದರು.

ಲೋಕ ಕಲ್ಯಾಣಾರ್ಥವಾಗಿ ಈ ಕಾರ್ಯಕ್ರಮ ಮಾಡುತ್ತಿದ್ದು, ಭಾನುವಾರ ಬೆಳಗ್ಗೆ ದೇವಾಲಯದಿಂದ ಹೊರಟು ಗಂಗೆ ತರುವ ಸ್ಥಳದಲ್ಲಿ ಸುಮಂಗಲಿಯರಿಂದ ಗಂಗಾ ಪೂಜೆ, ಗಂಗಾ ದೇವಿಗೆ ಬಾಗಿನ ಸಮರ್ಪಣೆ ಮಾಡಿ ಮಹಾ ಪ್ರಾರ್ಥನೆ ಸಲ್ಲಿಸಿ 108 ಅಗ್ರೋದಕ ಕಳಶಗಳನ್ನು ಗ್ರಾಮ ಪ್ರದಕ್ಷಿಣೆ ಹಾಗೂ ಉತ್ಸವದೊಂದಿಗೆ ದೇವಾಲಯಕ್ಕೆ ತರುವುದು. ನಂತರ ಶ್ರೀ ಸ್ವಾಮಿಯವರಿಗೆ ಮಹಾ ರುದ್ರಾಭಿಷೇಕ ಗಣಪತಿ ಹೋಮ, ನವಗ್ರಹ ಹೋಮ, ಮಹಾ ಮೃತ್ಯುಂಜಯ ಹೋಮ ಸೇರಿದಂತೆ ವಿವಿಧ ಹೋಮ-ಹವನ ನಡೆಯಲಿವೆ. ನಂತರ ತೀರ್ಥ ಪ್ರಸಾದ ವಿನಿಯೋಗ ಇದೆ ಎಂದರು.

ಧರ್ಮಸ್ಥಳದ ಶ್ರೀ ಡಾ.ವೀರೇಂದ್ರ ಹೆಗ್ಗಡೆ ಅವರ ಕೃಪಾಶೀರ್ವಾದದೊಂದಿಗೆ ಶ್ರೀ ಕ್ಷೇತ್ರ ರಾಮೋಹಳ್ಳಿಯ ಡಾ.ಶಾಕ್ಯಂ ಶ್ರೀ ಶಕ್ತಿಬಾಲ ಅಮ್ಮನವರ ಸಮ್ಮುಖದಲ್ಲಿ ಮಧ್ಯಾಹ್ನ 12 ಗಂಟೆಗೆ ಧಾರ್ಮಿಕ ಸಮಾರಂಭ ನಡೆಯಲಿದೆ. ಪರಮಪೂಜ್ಯ ಡಾ.ಶ್ರೀ ಕೃಷ್ಣಮೂರ್ತಿ ಸ್ವಾಮೀಜಿ, ದೈವೈಕ್ಯ ಪೂಜ್ಯಶ್ರೀ ಶ್ರೀ ದೇವರಾಜುಸ್ವಾಮಿ, ಡಾ.ಶ್ರೀ ಆನಂದ ಗುರೂಜಿ ಹಾಗೂ ನಿವೃತ್ತ ಸುಪ್ರೀಂಕೋರ್ಟ್ ನ್ಯಾಯಮೂರ್ತಿ ಎನ್.ಸಂತೋಷ್ ಹೆಗ್ಡೆಯವರು ಹಾಜರಿರುವರು ಎಂದರು.

> ಕಾರ್ಯಕ್ರಮದಲ್ಲಿ ಸ್ಥಳೀಯ ಶಾಸಕರು ಹಾಗೂ ಕರ್ನಾಟಕ ಗೃಹಮಂಡಳಿ ಅಧ್ಯಕ್ಷರಾದ ಕೆ.ಎಂ.ಶಿವಲಿಂಗೇಗೌಡ ಅವರಿಗೆ ಪ್ರತಿಷ್ಠಾನ ಹಾಗೂ ಗ್ರಾಮಸ್ಥರ ವತಿಯಿಂದ ಬರನಾಡಿನ ಭಗೀರಥ ಎಂಬ ನಾಮಾಂಕಿತದ ಬಿರುದು ಹಾಗೂ ಪ್ರಶಸ್ತಿ ಪದಾನ ಸಮಾರಂಭ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಅದೇ ದಿನ ಹಾಸನದ ಅಮ್ಮ ಕಣ್ಣಿನ ಆಸ್ಪತ್ರೆಯ ವೈದ್ಯರಿಂದ ಉಚಿತ ಕಣ್ಣಿನ ತಪಾಸಣೆ ಶಿಬಿರ ಹಮ್ಮಿಕೊಳ್ಳಲಾಗಿದ್ದು, ಸಮಸ್ಯೆ ಇದ್ದವರಿಗೆ ಉಚಿತ ಕಣ್ಣಿನ ಶಸ್ತ್ರಚಿಕಿತ್ಸೆ ಸಹ ಮಾಡಿಸಲಾಗುವುದು ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಹೋತ್ಸವ ಸಮಿತಿಯ ಉದಯ ಕುಮಾರ್, ರಾಜೇಶ್, ಬಸವರಾಜ್, ದೇವರಾಜ್ ಮೊದಲಾದವರಿದ್ದರು.

## ಇತಿಹಾಸದಲ್ಲಿ ಈ ದಿನ

### ಫೆಬ್ರವರಿ-07

1904: ಅಮೆರಿಕದ ಬಾಲ್ಟಿಮೋರ್ ನಗರದಲ್ಲಿ ಭಾರೀ ಅಗ್ನಿ ಅವಘಡ ಸಂಭವಿಸಿ ಸಾವಿರಕ್ಕೂ ಹೆಚ್ಚು ಕಟ್ಟಡಗಳು ಸುಟ್ಟುಹೋಯಿತು.

1940: ಪ್ರಸಿದ್ಧ ಕಾರ್ಟೂನ್ ಚಲನಚಿತ್ರ ಪಿನೋಚ್ಚಿಯೋ ಮೊದಲ ಬಾರಿ ಪ್ರದರ್ಶನಗೊಂಡಿತು.

1962: ಅಮೆರಿಕವು ಕ್ಯೂಬಾ ದೇಶದೊಂದಿಗೆ ವ್ಯಾಪಾರ ನಿರ್ಬಂಧ ಹೇರಿತು.

1964: ಪ್ರಸಿದ್ಧ ಸಂಗೀತ ತಂಡ ಬೀಟಲ್ಸ್ ಮೊಟ್ಟಮೊದಲು ಅಮೆರಿಕ ಪ್ರವೇಶಿಸಿತು.

1974: ಗ್ರೆನೆಡಾ ದೇಶ ಬ್ರಿಟಿಷರ ಆಳ್ವಿಕೆಯಿಂದ ಸ್ವಾತಂತ್ರ್ಯ ಪಡೆದುಕೊಂಡಿತು.

1984: ಅಂತರಿಕ್ಷ ಯಾತ್ರಿಕರು ಮೊದಲ ಬಾರಿಗೆ ಯಾವುದೇ ಕಂಬಿಯ ಸಹಾಯವಿಲ್ಲದೆ ಅಂತರಿಕ್ಷದಲ್ಲಿ ನಡೆದಾಡಿದರು.

1999: ಜೋರ್ಡಾನ್ ದೇಶದ ರಾಜ ಹುಸೇನ್ ನಿಧನರಾದರು; ಅವರ ಪುತ್ರ ಅಬ್ದುಲ್ಲಾ ಹೊಸ ರಾಜರಾದರು.

1898: ಡಾ. ಬಿ.ಆರ್. ಅಂಬೇಡ್ಕರ್ ಅವರ ಪತ್ನಿ ರಾಮಾಬಾಯಿ ಅಂಬೇಡ್ಕರ್ ಜನಿಸಿದರು.

1931: ಸ್ವಾತಂತ್ರ್ಯ ಹೋರಾಟಗಾರ ಹಾಗೂ ರಾಜಕಾರಣಿ ಮೋತೀಲಾಲ್ ನೆಹರು ನಿಧನರಾದರು.


**ಜನನ**

1867: ಅಮೆರಿಕದ ಲೇಖಕಿ ಲೋರಾ ಇಂಗಲ್ಸ್ ವೈಲ್ಡರ್

1962: ಪ್ರಸಿದ್ಧ ಗಾಯಕ ಗಾರ್ಥ್ ಬ್ರೂಕ್ಸ್

1966: ಹಾಸ್ಯ ನಟ ಕ್ರಿಸ್ ರಾಕ್

## ರಾಷ್ಟ್ರಕವಿ ಜಿ. ಎಸ್. ಶಿವರುದ್ರಪ್ಪರ ಜನ್ಮೋತ್ಸವ




07-02-1926 ರಂದು ಶಿವಮೊಗ್ಗ ಜಿಲ್ಲೆಯ ಶಿಕಾರಿಪುರದಲ್ಲಿ ಜನಿಸಿದ ಜಿ.ಎಸ್. ಶಿವರುದ್ರಪ್ಪರು ಕನ್ನಡ ಸಾಹಿತ್ಯ ಲೋಕದ ಹೆಮ್ಮೆಯ ರಾಷ್ಟ್ರಕವಿ,ಕವಿ,ವಿಮರ್ಶಕ ಮತ್ತು ಚಿಂತಕರಾಗಿದ್ದರು. ಸರಳ ಜೀವನ,ಉನ್ನತ ಚಿಂತನೆ ಮತ್ತು ಮಾನವೀಯ ಮೌಲ್ಯಗಳನ್ನು ಅವರು ತಮ್ಮ ಸಾಹಿತ್ಯದ ಮೂಲಕ ಜನಮನಗಳಿಗೆ ತಲುಪಿಸಿದರು.ಟಿಟಿಮಾನವನು ಮಾನವನಾಗಿರಲು ದೊಡ್ಡ ಪದವಿ ಬೇಡ;ಮೃದು ಮನಸ್ಸು , ದಯೆಯ ನೋಟ ಮತ್ತು ಸತ್ಯದ ನಡೆ ಸಾಕುಟಿಟಿಎಂಬ ಅವರ ಮಾತು ಇಂದಿಗೂ ಎಲ್ಲರಿಗೂ ದಾರಿದೀಪವಾಗಿದೆ.

ಎದೆ ತುಂಬಿ ಹಾಡಿದೆನು, ನನ್ನ ದೇಶ ನನ್ನ ಜನ, ಸಾವಿರಾರು ನದಿಗಳುಟಿಟಿ ಮೊದಲಾದ ಕೃತಿಗಳ ಮೂಲಕ ದೇಶಭಕ್ತಿ,ಮಾನವೀಯತೆ ಮತ್ತು ಸಮಾಜದ ಜವಾಬ್ದಾರಿಯನ್ನು ಅವರು ಸುಂದರವಾಗಿ ಬಿಂಬಿಸಿದರು. ಕನ್ನಡ ಭಾಷೆಯ ಮೇಲಿನ ಅಪಾರ ಪ್ರೀತಿ ಅವರ ಪ್ರತಿಯೊಂದು ಬರಹದಲ್ಲೂ ಗೋಚರಿಸುತ್ತದೆ.ಅವರ ಸಾಹಿತ್ಯ ಯುವಜನತೆಗೆ ಪ್ರೇರಣೆ ನೀಡುವ ಶಕ್ತಿ ಹೊಂದಿದ್ದು,ಉತ್ತಮ ಸಮಾಜ ನಿರ್ಮಾಣದ ದಾರಿಗೆ ನಮ್ಮನ್ನು ನಡೆಸುತ್ತದೆ.ರಾಷ್ಟ್ರಕವಿಯವರ ನೆನಪು ನಮ್ಮ ಹೃದಯಗಳಲ್ಲಿ ಸದಾ ಜೀವಂತವಾಗಿರುತ್ತದೆ.



**ಅಂತೋಣಿ ಮುತ್ತು ವಿ**
**ಶಿಕ್ಷಕರು, 7259675543**

## ಪೌಷ್ಟಿಕ ಆಹಾರದಿಂದ ಮಕ್ಕಳ ಆರೋಗ್ಯ ಸದೃಢ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಸರ್ಕಾರವು ಪಿಎಂ ಪೋಷಣ್ ಅಭಿಯಾನದಡಿ ಸರ್ಕಾರಿ ಶಾಲಾ ಮಕ್ಕಳಿಗೆ ಪೂರಕವಾದ ಪೌಷ್ಟಿಕ ಆಹಾರ, ಹಾಲು, ಬಿಸಿಯೂಟ, ರಾಗಿ ಮಾಲ್ಟ್ ನೀಡಲಾಗುತ್ತಿದೆ ಎಂದು ಪಿಎಂ ಪೋಷಣ್ ಅಭಿಯಾನದ ಸಹಾಯಕ ನಿರ್ದೇಶಕ ಉಮಾಶಂಕರ್ ಹೇಳಿದರು.



ತಾಲೂಕಿನ ಮೂಕೀಕೆರೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ರಾಷ್ಟ್ರೀಯ ಪೋಷಣ್ ಮಾಸಾಚಾರಣೆಯ ಪ್ರಯುಕ್ತ ಶಾಲೆಯ ಪೋಷಕರಿಗೆ ಏರ್ಪಡಿಸಿದ್ದ ಬೆಂಕಿ ರಹಿತ ಅಡುಗೆ ತಯಾರಿಸುವ ಸ್ಪರ್ಧೆಗೆ ಚಾಲನೆ ನೀಡಿ ಮಾತನಾಡಿ, ಇದರಿಂದ ಮಕ್ಕಳು ದೈಹಿಕ ಮತ್ತು ಮಾನಸಿಕವಾಗಿ ಸದೃಡವಾಗಲು ಸಹಕಾರಿಯಾಗಲಿದೆ. ಪಾಲಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ದಾಖಲಿಸಿ ಗುಣಮಟ್ಟದ ಶಿಕ್ಷಣ ಕಲ್ಪಿಸುವಲ್ಲಿ ಮುಂದಾಗಬೇಕು. ಸರ್ಕಾರಿ ಶಾಲೆಗಳಲ್ಲಿ ಉಚಿತ ಶಿಕ್ಷಣದ ಜೊತೆಗೆ ಸಿಗುವ ಎಲ್ಲಾ ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಶಿಕ್ಷಣ ಸಂಯೋಜಕ ಶ್ರೀನಿವಾಸ್ ಮಾತನಾಡಿ, ಸರ್ಕಾರಿ ಶಾಲೆಗಳ ಬಲವರ್ಧನೆಗೆ ಇಲಾಖೆ ಕೈಗೊಂಡಿರುವ ಕಾರ್ಯಕ್ರಮಗಳಿಗೆ ಸಾರ್ವಜನಿಕರು ಕೈ ಜೋಡಿಸಬೇಕು ಎಂದು ಮನವಿ ಮಾಡಿದರು.

ಆಯೋಜಿಸಿದ್ದ ಬೆಂಕಿ ರಹಿತ ಅಡುಗೆ ತಯಾರಿಸುವ ಸ್ಪರ್ಧೆಯಲ್ಲಿ ಮಾನಸ ಪ್ರಥಮ ಸ್ಥಾನ, ಮಣಿ ದ್ವಿತೀಯ ಸ್ಥಾನ ಹಾಗೂ ವೀಣಾ ತೃತೀಯ ಸ್ಥಾನಕ್ಕೆ ಬಾಜನರಾಗಿದ್ದು ಬಹುಮಾನ ಪಡೆದರು.

ದಿಡಗ ಸರ್ಕಾರಿ ಆರೋಗ್ಯ ಕೇಂದ್ರದ ಹಿರಿಯ ಸುರಕ್ಷಣಾ ಅಧಿಕಾರಿ ಸರೋಜಮ್ಮ, ಕಿರಿಯ ಸುರಕ್ಷಣಾ ಅಧಿಕಾರಿ ಪುಷ್ಪಲತಾ, ಎಸ್‌ಡಿಎಂಸಿ ಅಧ್ಯಕ್ಷೆ ಮಣಿ, ಉಪಾಧ್ಯಕ್ಷ ಮೋಹನ್ ಕುಮಾರ್, ಶಾಲೆಯ ಮುಖ್ಯ ಶಿಕ್ಷಕ ಶ್ರೀಕಾಂತ್, ಸಹ ಶಿಕ್ಷಕರಾದ ಕೆಂಪೇಗೌಡ, ಸೌಮ್ಯ, ರಮ್ಯ, ಪೋಷಕರು, ಶಾಲೆಯ ಹಿರಿಯ ವಿದ್ಯಾರ್ಥಿಗಳು ಹಾಗೂ ಇತರರು ಭಾಗವಹಿಸಿದ್ದರು.

## ಫೆ.13 ರಂದು ಬಹಿರಂಗ ಹರಾಜು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ಕರ್ನಾಟಕ ಲೋಕಾಯುಕ್ತ ಹಾಸನ ಕಚೇರಿಯಲ್ಲಿ ಹಳೆಯ ಮತ್ತು ನಿರುಪಯುಕ್ತ ಸಾಮಗ್ರಿಗಳು ಮತ್ತು ಗಣಕಯಂತ್ರ ಸಂಬಂದಿಸಿದ ವಸ್ತುಗಳನ್ನು ಫೆ.13 ರಂದು ಮಧ್ಯಾಹ್ನ 12 ಗಂಟೆಗೆ ಪೋಲಿಸ್ ಅಧಿಕ್ಷಕರ ಕಚೇರಿ, ಕರ್ನಾಟಕ ಲೋಕಾಯುಕ್ತ, ಜಿಲ್ಲಾಧಿಕಾರಿಗಳ ಕಚೇರಿ ಕಟ್ಟಡ, ಮೊದಲನೇ ಮಹಡಿ, ಹಾಸನ ಇಲ್ಲಿ ಬಹಿರಂಗ ಹರಾಜು ಮಾಡಲಾಗುತ್ತದೆ. ಹರಾಜಿನ ವಸ್ತುಗಳನ್ನು ಕಛೇರಿ ಸಮಯದಲ್ಲಿ ನೋಡಬಹುದು, ಯಶಸ್ವಿ ಖರೀದಾರರು ಹಣವನ್ನು ನಗದು ರೂಪದಲ್ಲಿ ಪಾವತಿಸಿ ಅವರ ಸ್ವಂತ ಖರ್ಚಿನಲ್ಲಿ ತೆಗೆದುಕೊಂಡು ಹೋಗುವುದು. ಹರಾಜಿನಲ್ಲಿ ಬಿಡ್ಡನ್ನು ಯಾವುದೇ ಕಾರಣಕ್ಕಾಗಿ ರದ್ದು ಮಾಡುವ ಇಲ್ಲದೆ ತಿರಸ್ಕರಿಸುವ ಅಧಿಕಾರವನ್ನು ಪೋಲಿಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ಹಾಸನರವರು ಹೊಂದಿರುತ್ತಾರೆ ಮತ್ತು ಇವರ ತೀರ್ಮಾನವೇ ಅಂತಿಮ ತೀರ್ಮಾನವೇ ಅಂತಿಮ ತೀರ್ಮಾನವಾಗಿದೆ. ಹೆಚ್ಚಿನ ವಿವರಗಳಿಗೆ ಕಚೇರಿಯ ದೂರವಾಣಿ ಸಂಖ್ಯೆ 08172-295198ಗೆ ಅಥವಾ ಪೋಲಿಸ್ ಅಧಿಕ್ಷಕರು, ಕರ್ನಾಟಕ ಲೋಕಾಯುಕ್ತ, ಜಿಲ್ಲಾಧಿಕಾರಿಗಳ ಕಚೇರಿ ಕಟ್ಟಡ, ಮೊದಲನೇ ಮಹಡಿ, ಹಾಸನ ಇಲ್ಲಿ ಸಂಪರ್ಕಿಸುವಂತೆ ಕರ್ನಾಟಕ ಲೋಕಾಯುಕ್ತದ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248